ಅ) 2000-2001ನೇ ಸಾಲಿನಲ್ಲಿ ಮೀನುಗಾರಿಕೆ ಅಭಿವೃದ್ಧಿಗಾಗಿ ಈ ಕೆಳಕಂಡ ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ.

ಮೀನು ಮರಿ ಉತ್ಪಾದನೆ, ಪಾಲನೆ ಮತ್ತು ಸಾಗಾಣಿಕೆ, ಜಲಾಶಯ ಮೀನುಗಾರಿಕೆ ಅಭಿವೃದ್ಧಿ ಯೋಜನೆ ಖಾಸಗಿ ವಲಯದಲ್ಲಿ ಮೀನು ಮರಿ ಉತ್ಪಾದನೆಗೆ ಸಹಾಯ, ಸಿಹಿ ನೀರು ಸಿಗಡಿ ಕೃಷಿಗೆ ಸಹಾಯ, ಮೀನು ಕೊಳಗಳ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸುವಿಕೆ, ಮೀನು ಕೊಳಗಳ ನಿರ್ಮಾಣಕ್ಕೆ ಸಹಾಯಧನ, ಹುಲ್ಲುಗೆಂದೆ ಮೀನು ಮರಿಗಳ ಸರಬರಾಜಿಗೆ ಸಹಾಯ, ಅಚ್ಚುಕಟ್ಟು ಪ್ರದೇಶದಲ್ಲಿನ; ಜೌಗು: ಚೌಳು ಪ್ರದೇಶಗಳಲ್ಲಿ ಮೀನು ಸಾಕಾಣಿಕೆಗೆ ಸಹಾಯ, ರಾಷ್ಟ್ರೀಯ ಸಹಕಾರಿ ಅಭಿವೃದ್ಧಿ ನಿಗಮದ ಒಳನಾಡು ಮೀನುಗಾರಿಕೆ ಯೋಜನೆ, ಕೇಂದ್ರ ಪುರಸ್ಕೃತ ಸಾಂಪ್ರದಾಯಿಕ ಮೀನುಗಾರಿಕೆ ದೋಣಿಗಳ ಮೋಟರೀಕರಣ ಯೋಜನೆ, ಯಾಂತ್ರೀಕೃತ ಮೀನುಗಾರಿಕೆ ದೋಣಿಗಳು, ಉಪಯೋಗಿಸುವ ಡೀಸಲ್ ಮೇಲಿನ ಕೇಂದ್ರ ಅಬಕಾರಿ ಶುಲ್ಕ ವಿನಾಯಿತಿ, ಮೀನುಗಾರಿಕೆ ಬಂದರುಗಳ ಇಳಿದಾಣ ತಂಗುದಾಣಗಳ ನಿರ್ಮಾಣ ಮತ್ತು ನಿರ್ವಹಣೆ ರಾಷ್ಟ್ರೀಯ ಸಹಕಾರಿ ಅಭಿವೃದ್ಧಿ ನಿಗಮದ ನೆರವಿನ ಸಮಗ್ರ ಕರಾವಳಿ ಮೀನುಗಾರಿಕೆ ಅಭಿವೃದ್ಧಿ ಯೋಜನೆ, ದೂರತೀರ ಮೀನುಗಾರಿಕೆ ದೋಣಿಗಳಿಗೆ ಅಳವಡಿಸಲು ವಿದ್ಯುನ್‌ಮಾನ ಉಪಕರಣಗಳನ್ನು ಖರೀದಿಸಲು ಸಹಾಯ, ಮೀನು ಕೃಷಿಕರ ಅಭಿವೃದ್ಧಿ ಸಂಸ್ಥೆ ಮತ್ತು ಸಿಗಡಿ ಕೃಷಿಕರ ಅಭಿವೃದ್ಧಿ ಸಂಸ್ಥೆಗಳ ಮುಂದುವರಿಕೆ.

ಗಡಿಭಾಗದ ಹಳ್ಳಿಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಅಭಿವೃದ್ಧಿ

1683 (2260) ಶ್ರೀ ಡೊಂಗರರಾಂವ ಶಹಜಹಾನ್ ಇಸ್ಮಾಯಿಲ್ (ಅಥಣಿ): ಮಾನ್ಯ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಅಥಣಿ ತಾಲ್ಲೂಕಿನ ಗಡಿ ಭಾಗದ ಹಳ್ಳಿಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಅಭಿವೃದ್ಧಿಗಾಗಿ ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು?

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು)

ಅ) ಅಥಣಿ ತಾಲ್ಲೂಕಿನ ಗಡಿಭಾಗದ ಪ್ರದೇಶಗಳನ್ನೊಳಗೊಂಡ ಗಡಿನಾಡು ಕನ್ನಡಿಗರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಸಲುವಾಗಿ ಪ್ರಾಧಿಕಾರ ತಜ್ಞರ ಸಭೆ ನಡೆಸಿದೆ. ಅಲ್ಲಿನ ಕನ್ನಡ ಶಾಲೆಗಳ ಸ್ಥಿತಿಗತಿಗಳನ್ನು ಸುಧಾರಿಸುವ ಬಗ್ಗೆ ಮತ್ತು ಸಾಂಸ್ಕೃತಿಕ ವಾತಾವರಣವನ್ನು ನಿರ್ಮಾಣ ಮಾಡುವ ಬಗ್ಗೆ ಸಂಬಂಧಿಸಿದ ಇಲಾಖೆಗಳೊಡನೆ ಚರ್ಚಿಸಿ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಗಡಿಭಾಗದ ಹಳ್ಳಿಗಳಲ್ಲಿ ಗಡಿ ಉತ್ಸವವನ್ನು ನಡೆಸಲಾಗುತ್ತದೆ.

ಕನ್ನಡ ಮತ್ತು ಸಂಸ್ಕೃತಿ ಪರ ಚಟುವಟಿಕೆಗಳನ್ನು ನಡೆಸಲು ಧನಸಹಾಯ ನೀಡಲಾಗುತ್ತದೆ.

ಬಯಲು ರಂಗಮಂದಿರ ನಿರ್ಮಿಸಲು ಧನ ಸಹಾಯ ನೀಡಲಾಗುತ್ತದೆ.

ಕಲಾವಿದರಿಗೆ ಗೌರವಧನ ಮಾಸಾಶನ ವೈದ್ಯಕೀಯ ನೆರವು ನೀಡಲಾಗುತ್ತದೆ.

ಕಾರ್ಕಳದಲ್ಲಿ ಐ.ಟಿ.ಐ ಪ್ರಾರಂಭಿಸುವುದು.

1685 (2264) ಶ್ರೀ ಗೋಪಾಲ ಭಂಡಾರಿ ಹೆಚ್. (ಕಾರ್ಕಳ): ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾರ್ಕಳದಲ್ಲಿ ಕಳೆದ ವರ್ಷ ಐ.ಟಿ.ಐ.ಯನ್ನು ಪ್ರಾರಂಭಿಸಲು ಅನುಮತಿ ಕೊಡಲಾಗಿದೆಯೆ;

ಆ) ಅನುಮತಿ ಸಿಕ್ಕಿದ್ದರೆ ಅದನ್ನು ಪ್ರಾರಂಭಿಸದಿರಲು ಕಾರಣವೇನು;

ಇ) ಈ ವರುಷವಾದರೂ ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ?

ಶ್ರೀ ಎ.ಎಂ.ಹಿಂಡಸಗೇರಿ (ಕಾರ್ಮಿಕ ಮತ್ತು ವಕ್ಫ್ ಸಚಿವರು).

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಇಲ್ಲ.

ರಾಜ್ಯ ಸರ್ಕಾರಿ ನೌಕರರಿಗೆ ವಸತಿ ಗೃಹಗಳ ನಿರ್ಮಾಣ

1686 (2396) ಶ್ರೀ ಎ.ಎಸ್.ಗುರುಸ್ವಾಮಿ (ಚಾಮುಂಡೇಶ್ವರಿ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರಿ ನೌಕರರುಗಳು ಬೆಂಗಳೂರು ನಗರದಲ್ಲಿ ಸರ್ಕಾರಿ ವಸತಿ ಗೃಹಗಳಿಗಾಗಿ ಸಲ್ಲಿಸಿರುವ ಅರ್ಜಿಗಳ ಒಟ್ಟು ಸಂಖ್ಯೆ ಎಷ್ಟು;

ಆ) ಆ ಪೈಕಿ ಹಂಚಿಕೆ ಮಾಡಲು ಉದ್ದೇಶಿಸಲಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು;

ಇ) ಎಲ್ಲಾ ಅರ್ಜಿದಾರರಿಗೆ ವಸತಿ ಗೃಹಗಳನ್ನು ಕಲ್ಪಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು;

ಈ) ಹೊಸದಾಗಿ ಎಷ್ಟು ವಸತಿ ಗೃಹಗಳನ್ನು ಯಾವ ಯಾವ ಸ್ಥಳಗಳಲ್ಲಿ ನಿರ್ಮಿಸಲು ಉದ್ದೇಶಿಸಲಾಗಿದೆ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು).

ಅ) 10438

ಆ) ಕರ್ನಾಟಕ ಸರ್ಕಾರಿ (ವಸತಿ ಗೃಹಗಳ ಹಂಚಿಕೆ) ನಿಯಮಗಳು 1999ರ ಪ್ರಕಾರ ಜೇಷ್ಠತೆಯ ಆಧಾರದ ಮೇಲೆ ಖಾಲಿ ವಸತಿ ಗೃಹಗಳ ಲಭ್ಯತೆಗೆ ಒಳಪಟ್ಟು ಎಲ್ಲ ಅರ್ಜಿಗಳಿಗೆ ಹಂಚಿಕೆ ಮಾಡಲು ಉದ್ದೇಶಿಸಲಾಗಿದೆ.